**R.W-1**

**ದಿನಾಂಕಃ 16-01-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

ನಾನು ಈ ದಿನ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಇರುವ ಎಲ್ಲಾ ವಿಷಯಗಳು ಸತ್ಯವಾಗಿವೆ .

**ಮುಂದುವೆರದ ಮುಖ್ಯ ವಿಚಾರಣೆ: 2 ನೇ ಎದುರುದಾರರ ಪರ ಶ್ರೀ. ಆರ್.ಎಸ್.ಎಸ್. ವಕೀಲರಿಂದಃ**

ಅಧಿಕಾರ ಪತ್ರವನ್ನು ನಿ.ಆರ್-1 ಮತ್ತು ವಿಮಾ ಪಾಲಿಸಿಯನ್ನು ನಿ.ಆರ್-2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ.ಬಿ.ಹೆಚ್.ಬಿ. ವಕೀಲರಿಂದಃ**

ನಾನು ಈ ದಿನ ಸಾಕ್ಷಿ ಹೇಳಲು ಬಂದಿರುವ ಪ್ರಕರಣದಲ್ಲಿ ಎರಡು ಮೋಟಾರ ಸೈಕಲ್ ಗಳು ಭಾಗಿಯಾಗಿರುತ್ತವೆ ಎಂದರೆ ಸರಿ. ಅಪಘಾತದ ಸಮಯದಲ್ಲಿ ಕೆಎ.35/ಎಸ್.7668 ವಾಹನಕ್ಕೆ ನಮ್ಮ ವಿಮಾ ಕಂಪನಿಯ ವಿಮಾ ಪಾಲಿಸಿ ಚಾಲ್ತಿಯಲ್ಲಿತ್ತು ಎಂದರೆ ಸರಿ. ಅಪಘಾತ ನಮ್ಮ ವಿಮಾ ಪಾಲಿಸಿ ಒಳಗೊಂಡ ವಾಹನದ ಚಾಲಕನ ತಪ್ಪಿನಿಂದಲೇ ಆಗಿದೆ ಎಂದರೆ ಸರಿಯಲ್ಲ. ಸದರಿ ವಾಹನದ ಚಾಲಕನಿಗೆ ಚಾಲನಾ ಪರವಾನಿಗೆ ಇರಲಿಲ್ಲ ಎಂದು ಪ್ರಮಾಣ ಪತ್ರದಲ್ಲಿ ಸುಳ್ಳು ಬರೆಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ವಿಮಾ ಪಾಲಿಸಿಯ ಷರತ್ತುಗಳನ್ನು ಉಲ್ಲಂಘನೆ ಮಾಡಲಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕೆಎ.04/ಜೆ.ಕೆ.9650 ನೇ ವಾಹನದ ಚಾಲಕನ ತಪ್ಪಿನಿಂದ ಅಪಘಾತವಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡಲು ನಮ್ಮ ವಿಮಾ ಕಂಪನಿಯವರೇ ಬಾಧ್ಯಸ್ಥರಾಗಿರುತ್ತಾರೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡಬೇಕಾಗುತ್ತದೆ ಎಂದು ಸುಳ್ಳು ಪ್ರವಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ವಿಮಾ ಕಂಪನಿಯವರೇ ಅರ್ಜಿದಾರರಿಗೆ ಪರಿಹಾರ ಕೊಡಲು ಬಾಧ್ಯರಾಗಿರುತ್ತೇವೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 4 ನೇ ಎದುರುದಾರರ ಪರ ಶ್ರೀ.ಕೆ.ವಿ.ಎ. ವಕೀಲರಿಂದಃ**

ನಾನು ಪೋಲಿಸ್ ದಾಖಲೆಗಳ ಆಧಾರದ ಮೇರೆಗೆ ಈ ಕೇಸಿನಲ್ಲಿ ಸಾಕ್ಷಿ

**R.W-1**

ಹೇಳುತ್ತಿದ್ದೇನೆ ಎಂದರೆ ಸರಿ. ಅಪಘಾತ ಕೆಎ.35/ಎಸ್.7668 ನೇ ವಾಹನದ ಚಾಲಕನ ತಪ್ಪಿನಿಂದ ಆಗಿದೆ ಎಂದು ಪೋಲಿಸರು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿ ಎರಡೂ ವಾಹನಗಳ ಚಾಲಕರುಗಳ ತಪ್ಪಿನಿಂದ ಆಗಿದೆ ಎಂದು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ ಎಂದು ಹೇಳುತ್ತಾರೆ. ಕೆಎ.04/ ಜೆ.ಕೆ.9650 ನೇ ವಾಹನದ ಚಾಲಕನ ತಪ್ಪಿನಿಂದ ಅಪಘಾತವಾಗಿರದ ಕಾರಣ 4 ನೇ ಎದುರುದಾರರು ಅರ್ಜಿದಾರರಿಗೆ ಯಾವುದೇ ಪರಿಹಾರ ಕೊಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.